**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ತಿ.ನರಸೀಪುರ.**

**ಓ.ಎಸ್. ನಂ:269/2011** **ಪಿ.ಡಬ್ಲೂ: 01**

ಸಾಕ್ಷಿಯನ್ನು ಇಂದು ದಿನಾಂಕಃ **07.07.2022** ರಂದು ಕರೆಸಿ ಪ್ರಮಾಣ ಮಾಡಿಸಲಾಯಿತು.

**ಮುಂದುವರೆದ ಪಾಟಿ ಸವಾಲುಃ 1** ಮತ್ತು **7**-ಎ ಪ್ರತಿವಾದಿಗಳ ಪರ ಶ್ರೀ **ಬಿ.ಎಂ.ಎನ್** ವಕೀಲರಿಂದಃ

**1, 5** ಮತ್ತು **6** ನೇ ಪ್ರತಿವಾದಿಗಳು ಪ್ರತ್ಯೇಕವಾಗಿ ಬೇರೆ ಬೇರೆ ಕಡೆ ವಾಸ ಮಾಡುತ್ತಿರುತ್ತಾರೆ ಎಂದರೆ ಸರಿ. ನಾನು ಮತ್ತು ನನ್ನ ಸಹೋದರಿಯವರು ನಮ್ಮ ನಮ್ಮ ಗಂಡರೊಂದಿಗೆ ಅವರ ಮನೆಯಲ್ಲಿ ವಾಸ ಮಾಡುತ್ತಿದ್ದೆವು ಎಂದರೆ ಸರಿ. ನನ್ನ ತಂದೆ, **1, 5** ಮತ್ತು **6** ನೇ ಪ್ರತಿವಾದಿಗಳು ದಿನಾಂಕ **06.04.1996** ರಲ್ಲಿ ಪಂಚಾಯತಿ ಪಾಲು ವಿಭಾಗ ಪತ್ರ ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ಸದರಿ ಪಂಚಾಯತಿಯಲ್ಲಿ ದಾವಾ-**3** ನೇ ಆಸ್ತಿಯು ನನ್ನ ತಂದೆಯವರು ಭಾಗಕ್ಕೆ ಬಂದಿದ್ದು, ಸದರಿಯವರು ಅದರ ಸ್ವಾಧೀನದಲ್ಲಿದ್ದರು ಎಂದರೆ ಸರಿಯಲ್ಲ. ಸದರಿ ಆಸ್ತಿ ನನ್ನ ತಂದೆಯ ಸ್ವಾಧೀನದಲ್ಲಿತ್ತು ಎಂದರೆ ಸರಿ. ಸದರಿ ಆಸ್ತಿಯು ನನ್ನ ತಂದೆಯವರಿಗೆ ಮಂಜೂರಾದ ಆಸ್ತಿ ಆಗಿರುತ್ತದೆ. ಸದರಿಯವರಿಗೆ ಯಾವಾಗ ಮಂಜೂರಾಗಿರುತ್ತದೆ ಎನ್ನುವುದು ನನಗೆ ಗೊತ್ತಿರುವುದಿಲ್ಲ. ಸದರಿ ದಾಖಲೆಯನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ನಾನು ಸದರಿ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ.

ದಾವಾ-**1** ನೇ ಆಸ್ತಿಯನ್ನು **1** ನೇ ಪ್ರತಿವಾದಿಯವರ ಭಾಗಕ್ಕೆ ನೀಡಲಾಗಿರುತ್ತದೆ ಎಂದರೆ ಸರಿಯಲ್ಲ. ಸದರಿ ಆಸ್ತಿಯ ಖಾತೆ ಅವರ ಹೆಸರಿನಲ್ಲಿ ಇರುತ್ತದೆ ಎಂದರೆ ಸರಿ. ಸದರಿ ಆಸ್ತಿ **1** ನೇ ಪ್ರತಿವಾದಿಯ ಸ್ವಾಧೀನದಲ್ಲಿ ಇರುತ್ತದೆ ಎಂದರೆ ಸರಿ. ಸದರಿ ಪಂಚಾಯತಿ ವಿಭಾಗದಲ್ಲಿ ಸರ್ವೇ ನಂ.**981** ಆಸ್ತಿಯನ್ನು **5** ನೇ ಪ್ರತಿವಾದಿ ಭಾಗಕ್ಕೆ ನೀಡಲಾಗಿರುತ್ತದೆ ಎಂದರೆ ಸರಿಯಲ್ಲ.

ದಾವಾ-4 ನೇ ಆಸ್ತಿಯನ್ನು 6 ನೇ ಪ್ರತಿವಾದಿಯ ಭಾಗಕ್ಕೆ ನೀಡಿದ್ದರು ಎಂದರೆ ಸರಿ. ಸದರಿ ಆಸ್ತಿಯನ್ನು 6 ನೇ ಪ್ರತಿವಾದಿಯವರು 1 ನೇ ಪ್ರತಿವಾದಿಯ ಹೆಂಡತಿ ಅಂದರೆ ಮೃತ 7 ನೇ ಪ್ರತಿವಾದಿಯವರಿಗೆ ಮಾರಾಟ ಮಾಡಿದ್ದರು ಎಂದರೆ ಸರಿಯಲ್ಲ. ಸದರಿ ಆಸ್ತಿಯನ್ನು 6 ನೇ ಪ್ರತಿವಾದಿ ಹಾಗೂ ಅವರ ಹೆಂಡತಿ-ಮಕ್ಕಳು ನಿಪಿ-13 ರಂತೆ 1 ನೇ ಪ್ರತಿವಾದಿಗೆ ಬರೆದುಕೊಟ್ಟಿರುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ.

ನಿಪಿ-13 ದಾಖಲೆಯನ್ನು ನಾನು ನನ್ನ ಸಾಕ್ಷ್ಯದಲ್ಲಿ ಹಾಜರುಪಡಿಸಿರುತ್ತೇನೆ ಎಂದರೆ ಸಾಕ್ಷಿಯು ನನ್ನ ಗಮನಕ್ಕೆ ಬಂದಿರುವುದಿಲ್ಲ ಎಂದು ನುಡಿಯುತ್ತಾರೆ. ಸದರಿ ದಾಖಲೆಯನ್ನು 6 ನೇ ಪ್ರತಿವಾದಿಯವರು ಪಡೆದುಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. ಸದರಿಯವರು ಇದೇ ನ್ಯಾಯಾಲಯದಲ್ಲಿ ಕೆಲಸ ಮಾಡುತ್ತಿರುತ್ತಾರೆ ಎಂದರೆ ಸರಿ. ಸದರಿ ಆಸ್ತಿಯನ್ನು 1 ನೇ ಪ್ರತಿವಾದಿ ಮತ್ತು ಅವರು ಕುಟುಂಬದವರು ನಿಪಿ-14 ರಂತೆ ಮೈಸೂರು ಬ್ಯಾಂಕಿನಲ್ಲಿ ಅಡಮಾನ ಮಾಡಿದ್ದರು ಎಂದರೆ ನನಗೆ ಗೊತ್ತಿರುವುದಿಲ್ಲ. ಸದರಿ ದಾಖಲೆಯ ದೃಢೀಕೃತ ನಕಲನ್ನು 6 ನೇ ಪ್ರತಿವಾದಿಯವರು ಪಡೆದುಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. ನಾನು ಹಾಜರುಪಡಿಸಿದ ಪಹಣಿ ಪತ್ರಿಕೆಗಳನ್ನು ನನ್ನ ಗಂಡ ಚಿಕ್ಕ ನಂಜಯ್ಯರವರು ಪಡೆದುಕೊಂಡಿರುತ್ತಾರೆ. ನಿಪಿ-8, ನಿಪಿ-10 ದಾಖಲೆಗಳನ್ನು 6 ನೇ ಪ್ರತಿವಾದಿಯವರು ಪಡೆದುಕೊಂಡಿರುತ್ತಾರೆ ಎಂದು ನಮೂದು ಇರುತ್ತದೆ ಎಂದರೆ ಸರಿ. 6 ನೇ ಪ್ರತಿವಾದಿಯು ನನ್ನೊಂದಿಗೆ ಚೆನ್ನಾಗಿ ಇರುತ್ತಾರೆ ಎಂದರೆ ಸರಿ. ಸದರಿಯವರು ನನ್ನ ಮುಖಾಂತರ ಈ ದಾವೆಯನ್ನು ಹಾಕಿಸಿರುತ್ತಾರೆ ಎಂದರೆ ಸರಿಯಲ್ಲ.

ದಾವಾ-3 ನೇ ಆಸ್ತಿಯ ಸ್ವಾಧೀನದಲ್ಲಿ ಯಾರು ಇರುತ್ತಾರೆ ಎನ್ನುವುದು ನನಗೆ ಗೊತ್ತಿರುವುದಿಲ್ಲ. ದಿನಾಂಕ 26.07.1997 ರಲ್ಲಿ ದಾವಾ-3 ನೇ ಆಸ್ತಿಯನ್ನು ನನ್ನ ತಂದೆ 2 ಪ್ರತ್ಯೇಕ ಕ್ರಯ ಪತ್ರಗಳ ಮುಖಾಂತರ ತಲಾ 1 ಎಕರೆ ಜಮೀನನ್ನು ತಮ್ಮಯ್ಯರವರಿಗೆ ಮಾರಾಟ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. ನನ್ನ ಅಣ್ಣ ತಮ್ಮ ಪ್ರತಿವಾದ ಪತ್ರ ಸಲ್ಲಿಸಿದ ನಂತರ ಸದರಿ ವಿಚಾರವನ್ನು ನಾನು ತಿಳಿದುಕೊಳ್ಳಲು ಪ್ರಯತ್ನ ಮಾಡಿರುವುದಿಲ್ಲ. ದಿನಾಂಕ 25.09.1997 ರಲ್ಲಿ ತಮ್ಮಯ್ಯರವರು ಸದರಿ ಆಸ್ತಿಗಳನ್ನು ಮಾದಪ್ಪರವರಿಗೆ ಮಾರಾಟ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. ಸದರಿ ಆಸ್ತಿ

ಮಾದಪ್ಪರವರ ಸ್ವಾಧೀನದಲ್ಲಿ ಇರುತ್ತದೆ ಎಂದರೆ ನನಗೆ ಗೊತ್ತಿರುವುದಿಲ್ಲ. ನಾನು ತಮ್ಮಯ್ಯ ಹಾಗೂ ಮಾದಪ್ಪರವರನ್ನು ಈ ದಾವೆಯಲ್ಲಿ ಪ್ರತಿವಾದಿಗಳನ್ನಾಗಿ ಮಾಡದೇ ಇರುವ ಕಾರಣ ಈ ದಾವೆ ಉರ್ಜಿತವಾಗಿರುವುದಿಲ್ಲ ಎಂದರೆ ಸರಿಯಲ್ಲ.

ದಾವಾ-4 ನೇ ಆಸ್ತಿಯಲ್ಲಿ 1 ನೇ ಪ್ರತಿವಾದಿಯವರು ವಾಸ ಮಾಡುತ್ತಿರುತ್ತಾರೆ ಎಂದರೆ ಸರಿ. 5 ನೇ ಪ್ರತಿವಾದಿಯವರು ವಾಸ ಮಾಡುತ್ತಿರುವ ಮನೆ ಎಲ್ಲಿ ಇರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. 6 ನೇ ಪ್ರತಿವಾದಿ ವಾಸ ಮಾಡುತ್ತಿರುವ ಮನೆ ಗೋಪಾಲಪುರದಲ್ಲಿದ್ದು, ಸದರಿಯವರು ಬಾಡಿಗೆ ಮನೆಯಲ್ಲಿ ವಾಸ ಮಾಡುತ್ತಿರುತ್ತಾರೆ. ನನ್ನ ತಂದೆಯವರು ಬರೆದುಕೊಟ್ಟ ಕ್ರಯ ಪತ್ರಗಳನ್ನು ಹಾಗೂ 6 ನೇ ಪ್ರತಿವಾದಿ ಬರೆದುಕೊಟ್ಟ ಕ್ರಯ ಪತ್ರಗಳನ್ನಾಗಲೀ ಎಲ್ಲಿಯೂ ಪ್ರಶ್ನೆ ಮಾಡಿರುವುದಿಲ್ಲ ಎಂದರೆ ಸರಿ.

6 ನೇ ಪ್ರತಿವಾದಿ ದಾವಾ-4 ನೇ ಆಸ್ತಿಗೆ ಸಂಬಂಧಿಸಿದಂತೆ ಮೈಸೂರು ಕೋ-ಆಪರೇಟಿವ್ ಬ್ಯಾಂಕಿನಲ್ಲಿ ದಿನಾಂಕ 12.05.1995 ರಲ್ಲಿ ಸಾಲ ಪಡೆದಿರುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. ಸದರಿ ಸಾಲವನ್ನು ತೀರಿಸಲು 6 ನೇ ಪ್ರತಿವಾದಿಯು 7 ನೇ ಪ್ರತಿವಾದಿಯವರಿಗೆ ಸದರಿ ಆಸ್ತಿಯನ್ನು ಮಾರಾಟ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. ನನಗೆ ಈ ದಾವಾ ಸ್ವತ್ತುಗಳಲ್ಲಿ ಯಾವುದೇ ಭಾಗಂಶದ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲಃ

ನನ್ನ ಹೇಳಿಕೆಯ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.

ಓ ಹೇ ಕೆ ಸರಿ ಇದೆ.

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,**
**ನ್ಯಾಯಾಲಯ ತಿ.ನರಸೀಪುರ.**